**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/ 402 /ಗ್ರಾಪಂಕಾ/2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 04-03-2014.



**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**


**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿ,

ಮಾನ್ಯರೆ,

**ವಿಷಯ:** ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಕಂಪ್ಯೂಟರೀಕೃತ ಕೌನ್ಸಿಲಿಂಗ್ ಮೂಲಕ ಗ್ರಾಮ ಪಂಚಾಯತಿಗಳಿಗೆ ನೇಮಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸಮಸಂಖ್ಯೆಯ ಪತ್ರ ದಿನಾಂಕ:03-03-2014.

****

ಮೇಲ್ಕಂಡ ವಿಷಯ ಮತ್ತು ಉಲ್ಲೇಖದ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮಾರ್ಚ್ ತಿಂಗಳ 2 ನೇ ವಾರದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸುತ್ತಿರುವುದರಿಂದ ಈ ಕೆಳಕಂಡ ಅಂಶಗಳನ್ನೊಳಗೊಂಡಂತೆ ತಂತ್ರಾಂಶ ರಚಿಸುವಂತೆ ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು ರವರಿಗೆ ತಿಳಿಸಲಾಗಿರುತ್ತದೆ. ಆದುದರಿಂದ ತಾವುಗಳು ಎನ್.ಐ.ಸಿ. ಅಧಿಕಾರಿಗಳನ್ನು ಸಂಪರ್ಕಿಸಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಕಂಪ್ಯೂಟರೀಕೃತ ಕೌನ್ಸಿಲಿಂಗ್ ಮುಖಾಂತರ ಸ್ಥಳ ನಿಯುಕ್ತಿಗೊಳಿಸಲು ತುರ್ತಾಗಿ ಕ್ರಮ ವಹಿಸುವಂತೆ ತಿಳಿಸಿದೆ.

1. ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆ ಖಾಲಿ ಇರುವ ಗ್ರಾಮ ಪಂಚಾಯತಿಗಳಲ್ಲಿ ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಕರ್ತವ್ಯ ನಿರ್ವಹಿಸುತ್ತಿದ್ದರೆ, ಆ ಹುದ್ದೆಗಳನ್ನು ಬ್ಲಾಕ್ ಮಾಡುವುದು.
2. ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಗ್ರಾಮ ಪಂಚಾಯತಿ ಕಾರ್ಯದರ್ಶಿ 2 ಹುದ್ದೆಗಳು ಎರಡೂ ಖಾಲಿ ಇರುವ ಗ್ರಾಮ ಪಂಚಾಯತಿಗಳಿಗೆ **ಮೊದಲ ಆದ್ಯತೆ** ನೀಡತಕ್ಕದ್ದು.
3. ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಲ್ಲಿ ಹೆಚ್ಚುವರಿ ಪ್ರಭಾರದಲ್ಲಿರುವ ಗ್ರಾಮ ಪಂಚಾಯತಿಗಳಿಗೆ **2ನೇ ಆದ್ಯತೆ** ನೀಡತಕ್ಕದ್ದು.
4. ಅಂಗವಿಕಲರಲ್ಲಿ (ಪುರಷ/ಮಹಿಳಾ) ಅಂಧ / ದೃಷ್ಠಿಮಾಂದ್ಯ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನಂತರ ಶ್ರವಣದೋಷ, ಚಲನವೈಕಲ್ಯ ಅಭ್ಯರ್ಥಿಗಳಿಗೆ ಆದ್ಯತೆ ನೀಡತಕ್ಕದ್ದು.
5. ಮಹಿಳಾ ಅಭ್ಯರ್ಥಿಗಳಿಗೆ **2ನೇ ಆದ್ಯತೆ** ನೀಡತಕ್ಕದ್ದು.
6. ಮಾಜಿ ಸೈನಿಕ ಅಭ್ಯರ್ಥಿಗಳಿಗೆ **3ನೇ ಆದ್ಯತೆ** ನೀಡತಕ್ಕದ್ದು.
7. ಪುರಷ ಅಭ್ಯರ್ಥಿಗಳಿಗೆ **4ನೇ ಆದ್ಯತೆ** ನೀಡತಕ್ಕದ್ದು.

ಮುಂದುವರೆದು, ಪ್ರಸ್ತುತ ಆರ್ಥಿಕ ವರ್ಷವು ಮಾರ್ಚ್ ತಿಂಗಳಿನಲ್ಲಿ ಮುಕ್ತಾಯಗೊಳ್ಳುವುದರಿಂದ ಗ್ರಾಮ ಪಂಚಾಯತಿಯ ಆಡಳಿತ ಮತ್ತು ಹಣಕಾಸಿನ ವ್ಯವಹಾರದ ದೃಷ್ಟಿಯಿಂದ ದಿನಾಂಕ:31-03-2014 ರ ವರೆಗೆ ಗ್ರಾಮ ಪಂಚಾಯತಿಗಳಲ್ಲಿ ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾಗಿ ಕರ್ತವ್ಯನಿರ್ವಹಿಸುತ್ತಿರುವವರನ್ನು ಹೆಚ್ಚುವರಿ ಪ್ರಭಾರದಲ್ಲಿಡಲು ಕ್ರಮ ವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಕೆ. ಯಾಲಕ್ಕಿಗೌಡ) 4/3/14
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.